ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ : ಸಿ5(2)ಮುಂಬಡ್ತಿ-07/2015-16 ದಿನಾಂಕ :25-07-2015

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಾಯಕ ನಿರ್ದೇಶಕರು / ಪತ್ರಾಂಕಿತ ವ್ಯವಸ್ಥಾಪಕರುಗಳಿಗೆ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪ್ಮೆ 2008 ದಿ : 06-01-2009.

3 :- ದಿನಾಂಕ : 16/07/2015 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4: ದಿನಾಂಕ: 25/07/2015 ರಂದು ನಡೆದ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅರ್ಹ ಅಧಿಕಾರಿಗಳು ಭಾಗವಹಿಸಿ, ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ.

* * * * * *

**ಪ್ರಸ್ತಾವನೆ :**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ಸಹಾಯಕರ ವೃಂದದ ಹುದ್ದೆಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಕಛೇರಿಗಳಲ್ಲಿನ ಪತ್ರಾಂಕಿತ ಸಹಾಯಕರ ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರ / ಸಹಾಯಕ ನಿರ್ದೇಶಕರು(ಬೋಧಕೇತರ) ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ:16/07/2015 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ದಿನಾಂಕ:16/07/2015 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭೆಯಲ್ಲಿ ಬಡ್ತಿಗಾಗಿ ಅರ್ಹರಿರುವ ಪತ್ರಾಂಕಿತ ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು (ಬೋಧಕೇತರ) ಗಳಿಗೆ ದಿನಾಂಕ:25/07/2015 ರಂದು ಸ್ಥಳ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗಿ, ಸದರಿ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಅಧಿಕಾರಿಗಳು ಸ್ವತ: ಸ್ಥಳಗಳನ್ನು ಆಯ್ಕೆ ಮಾಡಿಕೊಂಡ ಸ್ಥಳಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಬೇಕಾಗಿರುವುದರಿಂದ ಈ ಕೆಳಕಂಡ ಆದೇಶ.

**ಆದೇಶ :-**

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 21600-40050 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ

ವ್ಯವಸ್ಥಾಪಕರು / ಸಹಾಯಕ ನಿರ್ದೇಶಕರು(ಬೋಧಕೇತರ) ಗಳಿಗೆ ಗ್ರೂಪ್ 'ಬಿ' ವೃಂದದ ವೇತನ ಶ್ರೇಣಿ ರೂ. 22800–43200 ರ ಪತ್ರಾಂಕಿತ ಸಹಾಯಕರ ಹುದ್ದೆಗಳಿಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಅವರುಗಳ ಹೆಸರಿನ ಮುಂದೆ ಸೂಚಿಸಲಾಗಿರುವ ಹುದ್ದೆ ಮತ್ತು ಸ್ಥಳಗಳಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶವಾಗುವವರೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿದೆ.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಪತ್ರಾಂಕಿತ ವ್ಯವಸ್ಥಾಪಕರ ಹೆಸರು ಹಾಗೂ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯ ಹೆಸರು ಮತ್ತು ವಿಳಾಸ ಶ್ರೀಮತಿ / ಶ್ರೀ | ಪತ್ರಾಂಕಿತ ಸಹಾಯಕರ ಹುದ್ದೆಗೆ ಸ್ಥಾನಪನ್ನ ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಹುದ್ದೆ ಮತ್ತು ಕಛೇರಿಯ ವಿಳಾಸ |
|---|---|---|---|
| 1 | **41** | ಕೆ. ತಾರಾಬಾಯಿ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಕುಂದಾಪುರ ತಾಲ್ಲೂಕು, ಉಡುಪಿ ಜಿಲ್ಲೆ | ಪತ್ರಾಂಕಿತ ಸಹಾಯಕರು, ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಗಳೂರು, ದಕ್ಷಿಣ ಕನ್ನಡ ಜಿಲ್ಲೆ |
| 2 | **47** | ಎಸ್. ಶೈಲಜ, ಸಹಾಯಕ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು | ಪತ್ರಾಂಕಿತ ಸಹಾಯಕರು, ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ತುಮಕೂರು ಜಿಲ್ಲೆ, ತುಮಕೂರು |
| 3 | **53** | ರಮೇಶ್ ಎಂ ತುಂಬೆ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಮಂಗಳೂರು ದಕ್ಷಿಣ ವಲಯ, ಮಂಗಳೂರು | ಪತ್ರಾಂಕಿತ ಸಹಾಯಕರು, ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ, ಹಾಸನ |
| 4 | **54** | ಫಜ್ಲೂರ್ ರೆಹಮಾನ್, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಸಾಗರ, ಶಿವಮೊಗ್ಗ ಜಿಲ್ಲೆ | ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ |
| 5 | **65** | ಎಂ. ಬೋರೇಗೌಡ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಉತ್ತರ ವಲಯ, ಮಂಡ್ಯ ತಾಲ್ಲೂಕು ಮತ್ತು ಜಿಲ್ಲೆ | ಪತ್ರಾಂಕಿತ ಸಹಾಯಕರು, ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು |
| 6 | **66** | ಎನ್. ಸಿಂಗ್ರಿಗೌಡ, ಸಹಾಯಕ ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು | ಪತ್ರಾಂಕಿತ ಸಹಾಯಕರು, ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕೋಲಾರ ಜಿಲ್ಲೆ, ಕೋಲಾರ |

| | | | |
|---|---|---|---|
| 7 | **76** | ಕೆ. ಶ್ರೀರಂಗಯ್ಯ, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಗುಬ್ಬಿ ತಾಲ್ಲೂಕು, ತುಮಕೂರು ಜಿಲ್ಲೆ | ಪತ್ರಾಂಕಿತ ಸಹಾಯಕರು, ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ |

ಸ್ಥಾನಪನ್ನ ಬಡ್ತಿಯನ್ನು ಹೊಂದಿದ ಅಧಿಕಾರಿಗಳು ಈ ಆದೇಶ ಜಾರಿಯಾದ 10 ದಿನಗಳ ಒಳಗಾಗಿ ಅವರುಗಳು ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ.

25/7/15
(ಕೆ.ಎಸ್. ಸತ್ಯಮೂರ್ತಿ)
ಆಯುಕ್ತರು

ಇವರಿಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು. ರವರಿಗೆ ಮಾಹಿತಿಗಾಗಿ.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಸಂಬಂಧಿಸಿದ ಜಿಲ್ಲಾ ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗಳಿಗೆ.
4) ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ.
5) ಸಂಬಂಧಿಸಿದ ಅಧಿಕಾರಿಗಳಿಗೆ
6) ಕಛೇರಿ ಪ್ರತಿ.